ಕರ್ನಾಟಕ ವಿಧಾನ ಪರಿಷತ್

138ನೇ ಅಧಿವೇಶನ -2019

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ. | 141([illegible]) |
| ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಂ.ರೇವಣ್ಣ(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | ಮಾನ್ಯ ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 16.07.2019 |

| | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಬೋಧಕ ವರ್ಗದ ಬ್ಯಾಕ್‌ಲಾಗ್ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು |
| ಆ | ಈ ಬೋಧಕ ವರ್ಗದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಇರುವ ತೊಂದರೆಗಳು ಏನು: ಇದುವರೆವಿಗೂ ಸದರಿ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣವೇನು; | ರಿಟ್ ಅರ್ಜಿ ಸಂಖ್ಯೆ:30506-23/2013 & 38581/2013ರ ಪ್ರಕರಣಗಳಲ್ಲಿ ಮಾನ್ಯ ಉಚ್ಛ ನ್ಯಾಯಾಲಯವು ದಿನಾಂಕ:23.02.2017ರಂದು ನೀಡಿದ ತೀರ್ಪಿನನ್ವಯ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳಲು ಸರ್ಕಾರದ ಪತ್ರ ಸಂಖ್ಯೆ:ಇಡಿ 516 ಯುಎನ್ಇ 2015. ದಿ:21.06.2017ರಲ್ಲಿ ಉನ್ನತ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸಾಮಾನ್ಯವಾಗಿ ಅನ್ವಯಿಸುವಂತೆ ನಿರ್ದೇಶನ ನೀಡಲಾಗಿತ್ತು.<br><br>ಈ ನಿರ್ದೇಶನವನ್ನು ಅನುಸರಿಸಿ. ಬೆಂಗಳೂರು ವಿಶ್ವವಿದ್ಯಾಲಯದ ವಿವಿಧ ಅಧ್ಯಯನ ವಿಭಾಗಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಗುರುತಿಸಲಾ ಬೋಧಕ ಬ್ಯಾಕ್‌ಲಾಗ್ ಹುದ್ದೆಗಳನ್ನು **Karnataka State Civil Services (unfilled vacancies reserved for the persons belonging to the Scheduled Castes and Scheduled Tribes) (Special Recruitment) Rules, 2001.** ರ ಉಪಬಂಧಗಳು ಹಾಗೂ ಕಾಲಕಾಲಕ್ಕೆ ಸದರಿ ನಿಯಮಗಳಿಗೆ ತರಲಾಗಿರುವ ತಿದ್ದುಪಡಿಗಳು ಹಾಗೂ ಯು.ಜಿ.ಸಿ ಮಾರ್ಗಸೂಚಿ/ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ ಭರ್ತಿ ಮಾಡಿಕೊಳ್ಳಲು ಕ್ರಮಕೈಗೊಂಡು ಉನ್ನತ ಶಿಕ್ಷಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳಿಗೆ ಮಾಹಿತಿ ಸಲ್ಲಿಸುವಂತೆ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸರ್ಕಾರದ ಪತ್ರಸಂಖ್ಯೆ:ಇಡಿ 50 ಯುಬಿವಿ 2018. ದಿನಾಂಕ:27.02.2018ರಲ್ಲಿ ಸೂಚನೆಗಳನ್ನು ನೀಡಲಾಗಿತ್ತು. |
| ಇ | ಉದ್ಯೋಗ ಆಕಾಂಕ್ಷಿಗಳು ನ್ಯಾಯಾಲಯದ ಮೊರೆ ಹೋಗುವವರೆಗೂ ವಿಳಂಬ ಮಾಡಲು ಕಾರಣಗಳೇನು? | |

| | | | |
|---|---|---|---|
| | | | ಬ್ಯಾಕ್‌ಲಾಗ್ ಹುದ್ದೆಗಳ ಗುರುತಿಸುವಿಕೆ ಹಾಗೂ ಮೀಸಲಾತಿ ಸ್ವರದಿ ಪಟ್ಟಿಯ ನಿರ್ವಹಣೆ ಸಂಬಂಧದಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಮಾಹಿತಿ ಒದಗಿಸಿದ ನಂತರ ಸಮಾಜ ಕಲ್ಯಾಣ ಆಯುಕ್ತರಿಂದ. ಕಾರ್ಯದರ್ಶಿ. ಕೇಂದ್ರ ಪರಿಹಾರ ಸಮಿತಿ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ರಚಿಸಲಾದ ತನಿಖಾ ತಂಡವು ಬೆಂಗಳೂರು ವಿಶ್ವವಿದ್ಯಾಲಯದ ಬೋಧಕ ಹುದ್ದೆಗಳ ನೇರ ನೇಮಕಾತಿಗಳಲ್ಲಿ ರೋಸ್ಟರ್ ಅನ್ವಯಿಕೆ ಬಗ್ಗೆ ಸಮಗ್ರವಾಗಿ ಪರಿಶೀಲಿಸಿ ಅರ್ಹ ಅಭ್ಯರ್ಥಿಗಳ ಕೊರತೆಯಿಂದಾಗಿ ಅಥವಾ ಅನ್ಯಥಾ ಕಾರಣಗಳಿಂದಾಗಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಮೀಸಲಾದ ಹುದ್ದೆಗಳಿಗೆ ಇತರೆ ಪ್ರವರ್ಗದ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಂಡ ಅಥವಾ ಆ ಹುದ್ದೆಗಳನ್ನು ಭರ್ತಿ ಮಾಡದೆ ಮುಂದಕ್ಕೆ ಕೊಂಡೊಯ್ಯಲಾದ ಪರಿಣಾಮದಿಂದಾಗಿ ಉದ್ಭವಿಸಿದ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿದ ನಂತರದಲ್ಲಿ ಆರಂಭಿಸಲಾದ ನೇಮಕಾತಿ ಪ್ರಕ್ರಿಯೆ ಪ್ರಗತಿಗೆ 2019ರ ಮೇ ಮಾಹೆಯಲ್ಲಿ ನಡೆದ ಲೋಕಸಭೆಗೆ ನಡೆದ ಸಾರ್ವತ್ರಿಕ ಚುನಾವಣೆಯ ಹಿನ್ನೆಲೆಯಲ್ಲಿ ಜಾರಿಯಲ್ಲಿದ್ದ ಮಾದರಿ ನೀತಿ ಸಂಹಿತೆ ಹಾಗೂ ನೇಮಕಾತಿ ತಡೆ ಕೋರಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಲಾಗಿದ್ದ ನ್ಯಾಯಿಕ ಪ್ರಕರಣಗಳಿಂದಾಗಿ ಅಲ್ಪ ಹಿನ್ನಡೆಯಾಗಿದ್ದು, ಪ್ರಸ್ತುತ ಸಮರೋಪಾದಿಯಲ್ಲಿ ಪ್ರಗತಿಯಲ್ಲಿರುವ ನೇಮಕಾತಿ ಪ್ರಕ್ರಿಯೆಯಲ್ಲಿ ನಾಲ್ಕು ವಿಷಯಗಳ ಸಂದರ್ಶನ ಕಾರ್ಯ ಮುಕ್ತಾಯಗೊಂಡಿದ್ದು, ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ. |

ಇಡಿ/212/ಯುಬಿವಿ/2019

(ಜಿ.ಟಿ.ದೇವೇಗೌಡ)

ಉನ್ನತ ಶಿಕ್ಷಣ ಸಚಿವರು